## ಪ್ರಧಾನ ಹಿರಿಯ ಸಿವಿಲ್ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ. ಹುಣಸೂರು.

## ಸಿ.ಸಿ. ಸಂಖ್ಯೆ: 3338/22

**ಸಾಕ್ಷಿಯನ್ನು ದಿಃ 12.06.2023 ರಂದು ಕರೆಸಿ ಪ್ರಮಾಣವಚನ ಬೋಧಿಸಲಾಯಿತು.**

| | | |
|---|---|---|
| ಹೆಸರು | ಉಮೇಶ | ಸಿ.ಡಬ್ಲ್ಯೂಃ **4** ಪಿ.ಡಬ್ಲ್ಯೂಃ **1** |
| ತಂದೆಯ ಹೆಸರು | ದೇವಪ್ಪನಾಯಕ | |
| ವಯಸ್ಸು | 45 ವರ್ಷ | |
| ಕೆಲಸ | ಆಟೋ ಚಾಲಕ | |
| ವಾಸಸ್ಥಳ | ಹುಣಸೂರು | |

### ಮುಖ್ಯ ವಿಚಾರಣೆಃ ಮಾನ್ಯ ಸಸಅ ರವರಿಂದಃ

ಈಗ ನೋಡುತ್ತಿರುವ ದಾಖಲೆಯಲ್ಲಿ ನನ್ನ ಸಹಿ ಇದೆ. ದಾಖಲೆ ಮಹಜರ್ ಜೆರಾಕ್ಸ್ ಪ್ರತಿ ಆಗಿದ್ದು ಸದರಿ ಮೂಲಪ್ರತಿಯನ್ನು ಸಿ.ಸಿ.377/17 ರಲ್ಲಿ ಹಾಜರುಪಡಿಸಲಾಗಿರುತ್ತದೆ. ಸದರಿ ದಾಖಲಾತಿ ನಿಪಿ.1 ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು 3 ವರ್ಷಗಳ ಹಿಂದೆ ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಅದರಲ್ಲಿ ಏನು ಬರೆದಿದೆ ಬೇರೆ ಯಾರು ಸಹಿ ಮಾಡಿದ್ದಾರೆ ಗೊತ್ತಿಲ್ಲ. ನನ್ನ ಸಮಕ್ಷಮ ಪೊಲೀಸರು ಯಾವುದೇ ಮಹಜರ್ ಮಾಡಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಏನು ಗೊತ್ತಿರುವುದಿಲ್ಲ.

**(ಈ ಹಂತದಲ್ಲಿ ಮಾನ್ಯ ಸಅಅ ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಸಾಕ್ಷಿ ತನ್ನ ಸಾಕ್ಷ್ಯವನ್ನು ಅಭಿಯೋಜನೆಗೆ ಪ್ರತಿಕೂಲವಾಗಿ ನುಡಿದಿರುವ ಕಾರಣ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಸಲಾಯಿತು)**

### ಪಾಟೀಸವಾಲುಃ ಮಾನ್ಯ ಸಸಅ ರವರಿಂದಃ

ದಿಃ 29.01.2019 ರಂ ದು ಪೊಲೀಸರು ಚಾಸಾ-1 ರವರು ಸ್ಥಳ ತೋರಿಸಿದ ಮೇರೆಗೆ ನನ್ನ ಹಾಗೂ ಚಾಸಾ-1,5 ರವರ ಸಮಕ್ಷಮ ಬೆಳಿಗ್ಗೆ 11.00- 11.20 ರವರೆಗೆ ಮಹಜರ್ ಮಾಡಿ ಅದೇ ಸ್ಥಳದಲ್ಲಿ ನಮ್ಮ ಸಹಿ ಪಡೆದರು ಎಂದರೆ ಸರಿಯಲ್ಲ. ನಾನು ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ ಆರೋಪಿ ಪರ ವಕೀಲರು ಇಲ್ಲವೆಂದಿದ್ದಾರೆ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು).

ಓ.ಹೇ.ಕೇ.ಸ.ಇದೆ.

(ಶಿರಿನ್ ಜಾವೀದ್ ಅನ್ಸಾರಿ)
ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು
ಜೆ.ಎಂ.ಎಫ್.ಸಿ., ಹುಣಸೂರು.